## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಜಿ.ಎಸ್ ಹಡಪದ, ಹಿಂದಿನ ಪಂಚಾಯಿತಿ ವಿಸ್ತರಣಾ ಅಧಿಕಾರಿ, ಮೋರಟಗಿ ವಲಯ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ (ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ) ರವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅ.ಸ.ಪ.ಸಂ. Compt/UPLOK/BGM-196/2009/ARE-5, ದಿನಾಂಕ: 01.03.2018.

**ಪ್ರಸ್ತಾವನೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 27.02.2018 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಬಾಬಾಗೌಡ ಕಾಶೀರಾಯ ಬಿರಾದಾರ, ಗಬಸಾವಳಗಿ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು ಶ್ರೀ ಜಿ.ಎಸ್ ಹಡಪದ, ಹಿಂದಿನ ಪಂಚಾಯಿತಿ ವಿಸ್ತರಣಾ ಅಧಿಕಾರಿ, ಮೋರಟಗಿ ವಲಯ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ (ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ) (ಇನ್ನು ಮುಂದೆ 'ಎದುರುದಾರರು' ಎಂದು ಕರೆಯಲ್ಪಡುತ್ತಾರೆ) ಇವರುಗಳ ವಿರುದ್ಧ ದಾವಲಸಾಬ ಮುಲ್ಲಾ ಎಂಬುವವರು ಗಬಸಾವಳಗಿ ಗ್ರಾಮ ಪಂಚಾಯಿತಿಯ ಗ್ರಾಮ ಠಾಣಾ ಜಾಗವನ್ನು ಅತಿಕ್ರಮಿಸಿಕೊಂಡು ಕಟ್ಟಡ ಕಟ್ಟುತ್ತಿದ್ದು, ಎದುರುದಾರರು ಅತಿಕ್ರಮಣ ತಡೆಯಲು ಯಾವುದೇ ಕ್ರಮ ಜರುಗಿಸದಿರುವ ಬಗ್ಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

ಎದುರುದಾರರು ತಾವು ಪಂಚಾಯಿತಿ ವಿಸ್ತರಣಾ ಅಧಿಕಾರಿಯಾಗಿದ್ದು, ಅತಿಕ್ರಮಣವನ್ನು ತೆರವುಗೊಳಿಸಲು ತಮಗೆ ಅಧಿಕಾರವಿರುವುದಿಲ್ಲವೆಂದು ಆಕ್ಷೇಪಣೆಗಳನ್ನು ಸಲ್ಲಿಸಿರುತ್ತಾರೆ.

ಕಾರ್ಯನಿರ್ವಾಹಕಾಧಿಕಾರಿ ಸದರಿ ಆಸ್ತಿಯನ್ನು 1999–2000 ರ ಅವಧಿಯಲ್ಲಿ ಬೇಡಿಕೆ ವಹಿಯಲ್ಲಿ ದಾಖಲಿಸಲಾಗಿದ್ದು ಶ್ರೀ ಜಿ.ಎಸ್ ಹಡಪದ ರವರು ಸದರಿ ಅವಧಿಯಲ್ಲಿ ಗಬಸಾವಳಗಿ ಗ್ರಾಮ ಪಂಚಾಯಿತಿಯ ಕಾರ್ಯದರ್ಶಿಯಾಗಿದ್ದರೆಂದು ತಿಳಿಸಿರುತ್ತಾರೆ.

ಕಾರ್ಯನಿರ್ವಾಹಕಾಧಿಕಾರಿ ಅತಿಕ್ರಮಣವನ್ನು ತೆರವುಗೊಳಿಸಲು ಕ್ರಮ ಜರುಗಿಸುವಂತೆ ಪತ್ರದಲ್ಲಿ ತಿಳಿಸಿದ್ದರೂ ಎದುರುದಾರರು ಯಾವುದೇ ಕ್ರಮ ಕೈಗೊಂಡಿರುವುದಿಲ್ಲ.

ತನಿಖಾ ವರದಿಯ ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳಿಂದ ಎದುರುದಾರರಾದ ಶ್ರೀ ಜಿ.ಎಸ್ ಹಡಪದ, ಹಿಂದಿನ ಪಂಚಾಯಿತಿ ವಿಸ್ತರಣಾ ಅಧಿಕಾರಿ, ಮೋರಟಗಿ ವಲಯ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ (ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ) ರವರು ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮಗಳು 1966 ರ ನಿಯಮ 3(1) ರನ್ವಯ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವ ಹಿನ್ನೆಲೆಯಲ್ಲಿ ಸದರಿ ನೌಕರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214(2)(ಬಿ) ರನ್ವಯ ಶಿಸ್ತು ನಡವಳಿಕೆ ಜರುಗಿಸಲು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(3) ರನ್ವಯ ಪ್ರದತ್ತವಾದ ಅಧಿಕಾರದಡಿ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಶ್ರೀ ಜಿ.ಎಸ್ ಹಡಪದ, ಹಿಂದಿನ ಪಂಚಾಯಿತಿ ವಿಸ್ತರಣಾ ಅಧಿಕಾರಿ, ಮೋರಟಗಿ ವಲಯ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ (ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ) ಇವರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ ನಿಯಮಗಳು, 1957ರ ನಿಯಮ 214(2)(ಬಿ) ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

......2

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 139 ಗ್ರಾಪಂಕಾ 2018, ಬೆಂಗಳೂರು, ದಿನಾಂಕ: 24.03.2018**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಜಿ.ಎಸ್ ಹಡಪದ, ಹಿಂದಿನ ಪಂಚಾಯಿತಿ ವಿಸ್ತರಣಾ ಅಧಿಕಾರಿ, ಮೋರಟಗಿ ವಲಯ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ (ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ) ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214(2)(ಬಿ) ರಡಿ ಇಲಾಖಾ ವಿಚಾರಣೆಗೆ ಸರ್ಕಾರವು ಅನುಮತಿ ನೀಡಿ, ಸದರಿ ನೌಕರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿ ಆದೇಶಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214(2)(ಬಿ) ರಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

24/3

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತ ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
   **(ಮೇಲೆ ಓದಲಾದ ಪತ್ರದಲ್ಲಿ ಸಲ್ಲಿಸಲಾದ ಮೂಲ ದಾಖಲಾತಿಗಳನ್ನು ಪುಟ ಸಂಖ್ಯೆ 1 ರಿಂದ 31 ರವರೆಗೆ ಇದರೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ)**
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ವಿಜಯಪುರ ಜಿಲ್ಲಾ ಪಂಚಾಯತಿ, ವಿಜಯಪುರ
5. ಕಾರ್ಯನಿರ್ವಾಹಕ ಅಧಿಕಾರಿ, ಸಿಂದಗಿ ತಾಲ್ಲೂಕು ಪಂಚಾಯತಿ, ಸಿಂದಗಿ, ವಿಜಯಪುರ ಜಿಲ್ಲೆ. (ಸದರಿ ನೌಕರರಿಗೆ ಈ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವುದು.)
6. ಶ್ರೀ ಜಿ.ಎಸ್ ಹಡಪದ, ಹಿಂದಿನ ಪಂಚಾಯಿತಿ ವಿಸ್ತರಣಾ ಅಧಿಕಾರಿ, ಮೋರಟಗಿ ವಲಯ, ಸಿಂದಗಿ ತಾಲ್ಲೂಕು, ವಿಜಯಪುರ ಜಿಲ್ಲೆ (ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ).
7. ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.